ಕರ್ನಾಟಕ ಲೋಕಸೇವಾ ಆಯೋಗ

ಸಂಖ್ಯೆ : ಪಿಎಸ್ ಸಿ 22 ಇಪ /2026-27/13 ದಿನಾಂಕ: 16-04-2026

ಪ್ರಕಟಣೆ

2026ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, ದಿನಾಂಕ:09-05-2026 ರಿಂದ ದಿನಾಂಕ:31-05-2026 ರವರೆಗೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಹಾಗೂ ವಿಭಾಗೀಯ ಕೇಂದ್ರಗಳಲ್ಲಿ ಮತ್ತು ಬೆಂಗಳೂರು ಕೇಂದ್ರದಲ್ಲಿ ಪರೀಕ್ಷೆಗಳನ್ನು ನಡೆಸಲು ವೇಳಾ ಪಟ್ಟಿಯನ್ನು ಈ ಹಿಂದೆ ಪ್ರಕಟಿಸಲಾಗಿತ್ತು.

ಪ್ರಸ್ತುತ ರಾಜ್ಯಾದ್ಯಾಂತ 2027ರ ಜನಗಣತಿ ಕಾರ್ಯ ನಡೆಯುತ್ತಿರುವುದರಿಂದ ಸದರಿ ಕಾರ್ಯಕ್ಕೆ ಎಲ್ಲಾ ಸರ್ಕಾರಿ ಅಧಿಕಾರಿ/ನೌಕರರುಗಳನ್ನು ನಿಯೋಜಿಸಲಾಗಿರುತ್ತದೆ ಹಾಗೂ ಇಲಾಖಾ ಪರೀಕ್ಷೆಗಳನ್ನು ನಡೆಸುವಂತಹ ಶಾಲಾ/ಕಾಲೇಜುಗಳ ಅಧಿಕಾರಿ/ಸಿಬ್ಬಂದಿಗಳನ್ನು ಸಹ ಸದರಿ ಕಾರ್ಯಕ್ಕೆ ನಿಯೋಜಿಸಲಾಗಿರುತ್ತದೆ. ಇಲಾಖಾ ಪರೀಕ್ಷೆಗಳನ್ನು ಬರೆಯುವಂತಹ ಅಭ್ಯರ್ಥಿಗಳು ಸಹ ಸರ್ಕಾರಿ ಅಧಿಕಾರಿ/ನೌಕರರುಗಳಾಗಿದ್ದು, ಇಲಾಖಾ ಪರೀಕ್ಷೆಯನ್ನು ಬರೆಯುವ ಅಭ್ಯರ್ಥಿಗಳ ಹಿತದೃಷ್ಟಿಯಿಂದ 2026ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳನ್ನು ಮೂಂದೂಡಲಾಗಿರುತ್ತದೆ. ನಂತರ ಪರಿಷ್ಕೃತ ಪರೀಕ್ಷಾ ವೇಳಾ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಕಾರ್ಯದರ್ಶಿಯವರ ಆದೇಶದ ಮೇರೆಗೆ

ಸಹಿ/-

ಉಪ ಕಾರ್ಯದರ್ಶಿ(ಪ್ರ)

ಇಲಾಖಾ ಪರೀಕ್ಷಾ ಶಾಖೆ

ಕರ್ನಾಟಕ ಲೋಕಸೇವಾ ಆಯೋಗ

ಬೆಂಗಳೂರು